ಮೇಲೆ ಚಾರ್ಟರ್ಡ್ ಅಕೌಂಟೆಂಟ್‌ಗಳ ಸೇವೆಯನ್ನು ಬಳಸಿಕೊಂಡು ವಿದ್ಯುತ್ ಬಳಕೆದಾರರಿಗೆ ವಿದ್ಯುತ್ ಬಿಲ್ಲುಗಳನ್ನು ನೀಡುವ ವ್ಯವಸ್ಥೆಯನ್ನು ಮಾಡಲಾಗಿದೆ.

ಆ) 31-3-96ರಲ್ಲಿರುವಂತೆ ಖಾಲಿ ಇರುವ ಮೀಟರ್ ರೀಡರ್ : ಓವರ್‌ಸಿಯರ್: ಆಪರೇಟರ್‌ಗಳ ಹುದ್ದೆಗಳ ಒಟ್ಟು ಸಂಖ್ಯೆ: 474. 400 ಮೀಟರ್ ರೀಡರ್: ಆಪರೇಟರ್ : ಓವರ್‌ಸಿಯರ್ ಹುದ್ದೆಗಳಿಗೂ ಸೇರಿದಂತೆ 5000 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅಗತ್ಯವಿರುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ವಿಷಯ:- ಪರಿಶಿಷ್ಟ ಜಾತಿ / ಪಂಗಡಗಳವರ ಮನೆಗಳಿಗೆ ವಿದ್ಯುತ್ ಸೌಲಭ್ಯ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 940

ಶ್ರೀ ಯು.ಬಿ.ಬಣಕಾರ್:- ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1995-96ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದವರ ಮನೆಗಳಿಗೆ ವಿದ್ಯುತ್ ಸೌಲಭ್ಯ ಕಲ್ಪಿಸುವ ಸಲುವಾಗಿ ನಿಗದಿಪಡಿಸಿದ ಮೊತ್ತವೆಷ್ಟು?

ಆ) ಆ ಪೈಕಿ ಎಷ್ಟು ಹಣ ವೆಚ್ಚ ಮಾಡಲಾಗಿದೆ? ಎಷ್ಟು ಗೃಹಗಳಿಗೆ ವಿದ್ಯುತ್ ಸೌಲಭ್ಯ ಒದಗಿಸಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)

ಶ್ರೀ ಶರಣಬಸಪ್ಪ ದರ್ಶನಾಪುರ (ಇಂಧನ ರಾಜ್ಯ ಸಚಿವರು):-

ಅ) 1995-96ರ ಸಾಲಿನಲ್ಲಿ ಭಾಗ್ಯಜ್ಯೋತಿ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳ ಮನೆಗಳಿಗೆ ವಿದ್ಯುತ್ ಸೌಲಭ್ಯ ಕಲ್ಪಿಸುವ ಸೌಲಭ್ಯ ಸಲುವಾಗಿ ನಿಗದಿಪಡಿಸಿದ್ದ ಒಟ್ಟು ಮೊತ್ತ 5.15 ಕೋಟಿ ರೂ.ಗಳು.

ಆ) ಈ ಪೈಕಿ ವೆಚ್ಚ ಮಾಡಿರುವ ಹಣದ ಒಟ್ಟು ಮೊತ್ತ 2.88 ಕೋಟಿ ರೂ. ಒಟ್ಟು 42,665 ಪರಿಶಿಷ್ಟ ಜಾತಿ ಫಲಾನುಭವಿಗಳ ಮನೆಗಳಿದ್ದು ಮತ್ತು 18,501 ಪರಿಶಿಷ್ಟ ವರ್ಗದ ಫಲಾನುಭವಿಗಳ ಮನೆಗಳಿಗೂ ''ಭಾಗ್ಯಜ್ಯೋತಿ'' ಯೋಜನೆಯಡಿ ವಿದ್ಯುತ್ ಸಂಪರ್ಕದ ಸೌಲಭ್ಯವನ್ನು ಕಲ್ಪಿಸಲಾಗಿದೆ. ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಿದೆ.

ವಿಷಯ:- ಮಂಗಳೂರು ನಗರದಲ್ಲಿ ಅಗ್ನಿಶಾಮಕ ದಳದವರಿಂದ ಪರವಾನಗಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 665 (1399)

ಶ್ರೀ ಕೆ.ಜಯರಾಮಶೆಟ್ಟಿ:- ಮಾನ್ಯ ಸೆರೆಮನೆ, ಗೃಹ ರಕ್ಷಕ ದಳ ಹಾಗೂ ಅಗ್ನಿಶಾಮಕ ಸೇವೆಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?